# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.1149/2016/ಸನಿಕಾಸ–2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 30.3.2017

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ಪಟ್ಟಣದ ಖಾತೆ ನಂ.1470/1268ರಲ್ಲಿರುವ ವಾಣಿಜ್ಯ ಕಟ್ಟಡವನ್ನು ಅನುಮೋದನೆ ನಕ್ಷೆ ಹೊರತುಪಡಿಸಿ ಕಟ್ಟಿದ ಕಟ್ಟಡವನ್ನು ಮುಟ್ಟುಗೋಲುಹಾಕಿಕೊಂಡು, ಅದನ್ನು ನೆಲಸಮಗೊಳಿಸಿ ಸಾರ್ವಜನಿಕ ಆಸ್ತಿಯನ್ನು ರಕ್ಷಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು **ಕೋರಿ.**

*******

ಶ್ರೀ ಎನ್. ರಾಜಣ್ಣ, ಅಡೇಪೇಟೆ, ನೆಲಮಂಗಲ, ಬೆಂಗಳೂರು ಗ್ರಾಮಾಂತರ ಜಿಲ್ಲೆ, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಮುಖ್ಯಾಧಿಕಾರಿಗಳು, ನೆಲಮಂಗಲ ಪುರಸಭೆ ಹಾಗೂ (2) ಸದಸ್ಯ ಕಾರ್ಯದರ್ಶಿಗಳು, ನೆಲಮಂಗಲ ಯೋಜನಾ ಪ್ರಾಧಿಕಾರ, ಬೆಂಗಳೂರು ಗ್ರಾಮಾಂತರ ಜಿಲ್ಲೆ (ಇನ್ನು ಮುಂದೆ ಕ್ರಮವಾಗಿ 1 ಮತ್ತು 2ನೇ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:–**

ದೂರುದಾರರು ತಮ್ಮ ದೂರಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ಪಟ್ಟಣದ ಖಾತೆ ನಂ.1470/1268 ರಲ್ಲಿ ವಾಣಿಜ್ಯ ಕಟ್ಟಡ ನಿರ್ಮಾಣ ಮಾಡಲು ನೆಲಮಂಗಲ ನಗರ ಯೋಜನಾ ಪ್ರಾಧಿಕಾರದಿಂದ ಕಟ್ಟಡ ನಕ್ಷೆಯನ್ನು ಮಂಜೂರು ಮಾಡಿರುತ್ತಾರೆ. ಆದರೆ ಮಂಜೂರಾದ ನಕ್ಷೆಯ ವಿರುದ್ಧವಾಗಿ ಸೆಟ್ ಬ್ಯಾಕ್ ಬಿಡದೆ ಮತ್ತು ಸಾರ್ವಜನಿಕ ರಸ್ತೆಯನ್ನು ಒತ್ತುವರಿ ಮಾಡಿಕೊಂಡು ಕಟ್ಟಡ ನಿರ್ಮಾಣ ಮಾಡುತ್ತಿದ್ದು, ಅದಕ್ಕೆ ಎದುರುದಾರರು ಷಾಮೀಲಾಗಿ ತ್ವರಿತಗತಿಯಲ್ಲಿ ಕಾಮಗಾರಿ ನಡೆಸುತ್ತಿದ್ದಾರೆ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಜರುಗಿಸಿ ಅಕ್ರಮಕಟ್ಟಡವನ್ನು ತಡೆಗಟ್ಟಬೇಕೆಂದು ದೂರು ಸಲ್ಲಿಸಿದ್ದಾರೆ.

3. 1ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಹಿಂದಿನ ಮುಖ್ಯಾಧಿಕಾರಿಗಳು 23.5.2016ರಂದು ಮತ್ತು 25.5.2016ರಂದು ಪುರಸಭೆಯಿಂದ ಒತ್ತುವರಿ ಕಟ್ಟಡದ ಮಾಲೀಕರಿಗೆ ನೋಟೀಸುನೀಡಿರುತ್ತಾರೆ. ತಾನು ದಿ.2.7.2016ರಂದು ಇಲ್ಲಿ ಕರ್ತವ್ಯವಹಿಸಿಕೊಂಡು ಕಡತ ಪರಿಶೀಲಿಸಿ, ಕಿರಿಯ ಅಭಿಯಂತರಿಂದ ಸ್ಥಳಪರಿಶೀಲಿಸಿ ವರದಿ ಪಡೆದುಕೊಂಡು ತಿಳುವಳಿಕೆ ಪತ್ರ ಜಾರಿಮಾಡಲಾಗಿರುತ್ತದೆ. ದಿ.19.7.2016ರಂದು ಕಟ್ಟಡದ ಮಾಲೀಕ ಶ್ರೀ ನಾಗರಾಜ್ ಅವರು ಉತ್ತರ ನೀಡಿದ್ದು, ಅದು ತೃಪ್ತಿದಾಯಕವಾಗಿಲ್ಲದ ಕಾರಣ ಕೆಲಸ ನಡೆಯುತ್ತಿರುವ ಸಂದರ್ಭದಲ್ಲಿ ಅಧಿಕಾರಿಗಳೊಂದಿಗೆ ಸ್ಥಳ ಮಹಜರ್ ಮಾಡಿ ಕಟ್ಟಡ ನಿರ್ಮಾಣದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. 2ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ತಾವು ಪ್ರಾರಂಭಿಕ ಪ್ರಮಾಣಪತ್ರ ಮತ್ತು ಅನೊಮೋದಿತ ನಕ್ಷೆಯನ್ನು ಮುಂದಿನ ಕ್ರಮಕ್ಕಾಗಿ ನೆಲಮಂಗಲ ಪುರಸಭೆ ಕಾರ್ಯಾಲಯಕ್ಕೆ ಸಲ್ಲಿಸಲಾಗಿರುತ್ತದೆ. ಅನುಮೋದಿತ ಕಟ್ಟಡ ನಕ್ಷೆಯಂತೆ ಕಟ್ಟಡವನ್ನು ಕಟ್ಟುವ ಬಗ್ಗೆ ಕ್ರಮವಹಿಸಲು ಸೂಚಿಸಲಾಗಿದೆ. ಆದ್ದರಿಂದ ಈ ಪ್ರಕರಣಕ್ಕೂ ತಮಗೂ ಯಾವುದೇ ಸಂಬಂಧವಿರದ ಕಾರಣ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

5. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನಲ್ಲಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

6. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳು, ಮತ್ತು ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ಶ್ರೀ ಎನ್.ಬಿ.ನಾಗರಾಜ್ ಎನ್ನುವವರು ಆಸ್ತಿ ನಂ.1470/1268 ರಲ್ಲಿ ವಾಣಿಜ್ಯ ಕಟ್ಟಡ ನಿರ್ಮಾಣ ಮಾಡಲು ನೆಲಮಂಗಲ ನಗರ ಯೋಜನಾ ಪ್ರಾಧಿಕಾರದಿಂದ ದಿ.11.1.2016ರಂದು ಕಟ್ಟಡ ನಕ್ಷೆಯ ಮಂಜೂರಾತಿ ಪಡೆದಿರುತ್ತಾರೆ. ಆದರೆ ಇವರು ಮಂಜೂರಾತಿ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ಕಟ್ಟುತ್ತಿದ್ದಾರೆಂದು ದೂರುದಾರರು ಆಪಾದಿಸಿರುತ್ತಾರೆ.

7. 1ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಕಟ್ಟಡದ ಮಾಲೀಕ ಎನ್.ಬಿ.ನಾಗರಾಜು ಅವರು ಅನುಮೋದಿತ ನಕ್ಷೆ ಉಲ್ಲಂಘಿಸಿ ಸಾರ್ವಜನಿಕ ರಸ್ತೆಯನ್ನು ಒತ್ತುವರಿ ಮಾಡಿಕೊಂಡು ಕಟ್ಟಡ ಕಟ್ಟುತ್ತಿರುವುದರಿಂದ ಅವರಿಗೆ ತನ್ನ ಪೂರ್ವದ ಅಧಿಕಾರಿಗಳು ಹಾಗೂ ತಾವು ತಿಳುವಳಿಕೆ ನೋಟೀಸು ನೀಡಿ ಅದಕ್ಕೆ ಅವರು ತೃಪ್ತಿದಾಯಕ ಉತ್ತರ ನೀಡದ ಕಾರಣ ಸ್ಥಳಪರಿಶೀಲಿಸಿ, ಕಟ್ಟಡ ಸಾಮಗ್ರಿಗಳನ್ನು

ಜಪ್ತು ಮಾಡಿಕೊಂಡಿದ್ದಾಗಿ ತಿಳಿಸಿರುತ್ತಾರೆ. ಅಂದರೆ ಈ ವಾಣಿಜ್ಯ ಕಟ್ಟಡವನ್ನು ಅನುಮೋದಿತ ನಕ್ಷೆಗೆ ವಿರುದ್ಧವಾಗಿ ಕಟ್ಟುತ್ತಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದರೆ ಈ ರೀತಿ ದೂರುಬಂದ ಕಾರಣ 1ನೇ ಎದುರುದಾರರು ಕಾನೂನುರೀತ್ಯಾ ಕ್ರಮವಹಿಸಿದ್ದು, ಇರುತ್ತದೆ. ಆದರೆ ಅಕ್ರಮಕಟ್ಟಡ ನಿರ್ಮಾಣ ನಿಂತಿರುವುದಿಲ್ಲ ಹಾಗೂ ತೆರವುಗೊಳಿಸಿರುವುದಿಲ್ಲವೆಂದು ಸಹ ಕಂಡುಬರುತ್ತದೆ.

8. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ಪಟ್ಟಣದ ಆಸ್ತಿ ಸಂ.1470/1268ರಲ್ಲಿ ಅನುಮೋದಿತ ನಕ್ಷೆ ಉಲ್ಲಂಘಿಸಿ ಕಟ್ಟುತ್ತಿರುವ ವಾಣಿಜ್ಯ ಕಟ್ಟಡವನ್ನು ಅನುಮೋದನೆ ನಕ್ಷೆ ಹೊರತುಪಡಿಸಿ ಕಟ್ಟಿದ ಕಟ್ಟಡವನ್ನು ಕಾನೂನಿನ ಪ್ರಕಾರ ಮುಟ್ಟುಗೋಲುಹಾಕಿಕೊಂಡು, ಅದನ್ನು ನೆಲಸಮಗೊಳಿಸಿ ಸಾರ್ವಜನಿಕ ಆಸ್ತಿಯನ್ನು ರಕ್ಷಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

9. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

Sd/- 2/3/17

[ ನ್ಯಾಯಮೂರ್ತಿ ಸುಭಾಷ್ ಬಿ ಅಡಿ]
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ.

ex 30/3